# ಸೈನಿಕ ಶಾಲೆಯಲ್ಲಿ ಶಿಕ್ಷಕರ ದಿನಾಚರಣೆ




ಸೈನಿಕ ಶಾಲೆಯಲ್ಲಿ ಅತ್ಯಂತ ವಿಜ್ರಂಭಣೆಯಿಂದ ಶಿಕ್ಷಕರ ದಿನಾಚರಣೆಯನ್ನು ಆಚರಿಸಲಾಯಿತು. ಶಾಲೆಯ ಎಸ್ ಆರ್ ಕಂಠಿ ಸಭಾಂಗಣದಲ್ಲಿ ಸಾಂಪ್ರದಾಯಿಕ ಜ್ಯೋತಿ ಬೆಳಗುವದರೊಂದಿಗೆ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಪ್ರಾಚಾರ್ಯ ಕರ್ನಲ್ ತಮೋಜಿತ್ ಬಿಸ್ವಾಸ ಆದರ್ಶ ಶಿಕ್ಷಕ ಸರ್ವೇಪಲ್ಲಿ ರಾಧಾಕೃಷ್ಣನ್ ಅವರ ಭಾವಚಿತ್ರಕ್ಕೆ ಹೂಮಾಲೆ ಹಾಕಿ ಗೌರವ ಸಲ್ಲಿಸಿದರು.

ಮುಖ್ಯ ಅತಿಥಿಗಳಾಗಿ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಕುಲಸಚಿವರಾದ ಪ್ರೊ. ಕೆ ಪಿ ಶ್ರೀನಾಥ್ ಆಗಮಿಸಿದ್ದರು. ಅವರು ವಿದ್ಯಾರ್ಥಿಗಳನ್ನುದ್ದೇಶಿಸಿ ಮಾತನಾಡಿ, ವಿದ್ಯಾರ್ಥಿ ಜೀವನದಲ್ಲಿ ಶಿಕ್ಷಕರು ಕಲಿಸಿದ ಆದರ್ಶಗಳನ್ನು ಬದುಕಿನುದ್ದಕ್ಕೂ ರೂಢಿಸಿಕೊಳ್ಳಬೇಕು. ಆಧುನಿಕ ಯುಗದಲ್ಲಿ ಅನೇಕ ಶೈಕ್ಷಣಿಕ ಮಾಧ್ಯಮಗಳು ದೊರೆತರೂ ಯೋಗ್ಯ ಮಾರ್ಗದರ್ಶನಕ್ಕಾಗಿ ಶಿಕ್ಷಕರ ಆಗತ್ಯವಿದೆಯೆಂದು ನುಡಿದರು.

ಸೈನಿಕ ಶಾಲೆಯ ಅಧ್ಯಾಪಕ ಕೆ ಜಿ ಮಹೇಶ ಮಾತನಾಡಿ ಸರ್ವೇಪಲ್ಲಿ ರಾಧಾಕೃಷ್ಣನ್ ಅವರು ಶಿಕ್ಷಕರ ಬಗ್ಗೆ ತೋರಿಸಿದ ಕಾಳಜಿಯ ಬಗ್ಗೆ ನುಡಿದರು. ವಿದ್ಯಾರ್ಥಿಗಳ ಭವಿಷ್ಯ ನಿರ್ಮಾಣದಲ್ಲಿ ಶಿಕ್ಷಕರ ಪಾತ್ರ ಅತ್ಯಂತ ಮಹತ್ವದ್ದೆಂದು ವಿವರಿಸಿದರು.

ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳಾದ ಕೆಡೆಟ್ ಶ್ರವಣಕುಮಾರ ಮತ್ತು ಅಯುಬ ಮಾತನಾಡಿದರು. ಆಂಗ್ಲ ಅಧ್ಯಾಪಕರಾಧ ಪುಷ್ಪರಾಜ ಶೆಟ್ಟಿ ಕಾರ್ಯಕ್ರಮದ ನಿರೂಪಣೆ ಮಾಡಿದರು. ಸಂಗೀತ ವಿಭಾಗದ ಮಕ್ಕಳು ಗುರುವಿನ ಮಹತ್ವ ಕುರಿತು ಸಾಮೂಹಿಕ ಗಾಯನ ಪ್ರಸ್ತುತಪಡಿಸಿದರು.

ಶಾಲೆಯ ಉಪಪ್ರಾಚಾರ್ಯ ಸ್ಕ್ವಾಡರ್ನ್ ಲೀಡರ್ ಕೆ ಜೆ ಎಮ್ ರೆಡ್ಡಿ, ಆಡಳಿತಾಧಿಕಾರಿ ಸ್ಕ್ವಾಡರ್ನ್ ಲೀಡರ್ ಎ ಮುರುಳೀಧರನ್, ಹಿರಿಯ ಗುರುಗಳಾದ ಜಿ ಶ್ರೀರಾಮಮೂರ್ತಿ, ಸಿಬ್ಬಂದಿಯವರು ಉಪಸ್ಥಿತರಿದ್ದರು.